# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 629(673) |
| ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 19.09.2022 |
| ಉತ್ತರಿಸಬೇಕಾದ ಸಚಿವರು | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಪ್ರೌಢಶಾಲಾ ಹಂತದಲ್ಲಿ ಜಾರಿಗೊಳಿಸುವಲ್ಲಿ ರೂಪಿಸಲಾಗಿರುವ ರೂಪುರೇಷೆಗಳೇನು; (ಪೂರ್ಣ ವಿವರ ನೀಡುವುದು) | ರಾಷ್ಟ್ರೀಯ ಶಿಕ್ಷಣ ನೀತಿ 2020 ರನ್ವಯ ಪ್ರೌಢಶಾಲಾ ಹಂತವು 9 ರಿಂದ 12 ನೇ ತರಗತಿಗಳನ್ನು ಒಳಗೊಂಡಿದೆ. ಮೊದಲನೇ ಹಂತ 9, 10 ತರಗತಿಯವರೆಗೆ. ಹಾಗೂ ಎರಡನೇ ಹಂತ 11, 12 ತರಗತಿಯವರೆಗೆ. ರಾಷ್ಟ್ರೀಯ ಶಿಕ್ಷಕರ ನೀತಿ 2020 ರ ಕಂಡಿಕೆ 4.1 ರಲ್ಲಿ The curricular and pedagogical structure of school education will be reconfigured to make it responsive and relevant to the developmental needs and interests of learners at different stages of their development, corresponding to the age ranges of 3-8, 8-11, 11-14, and 14-18 years, respectively. The curricular and pedagogical structure and the curricular framework for school education will therefore be guided by a 5+3+3+4 design, consisting of the Foundational Stage (in two parts, that is, 3 years of Anganwadi/pre-school + 2 years in primary school in Grades 1-2; both together covering ages 3-8), Preparatory Stage (Grades 3-5, covering ages 8-11), Middle Stage (Grades 6-8, covering ages 11-14), and Secondary Stage (Grades 9-12 in two phases, i.e., 9 and 10 in the first and 11 and 12 in the second, covering ages 14-18). ಶಾಲಾ ಶಿಕ್ಷಣ ಪಠ್ಯಕ್ರಮ ಚೌಕಟ್ಟು ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢ ಹಂತದ ಶಿಕ್ಷಣವನ್ನು ಒಳಗೊಂಡಿದ್ದು, ಚಾಲನಾ ಸಮಿತಿಯನ್ನು ರಚಿಸಲಾಗಿದೆ. |
| ಆ) | ಸದರಿ ನೀತಿಯ ಅನುಸಾರ 9, 10 ಮತ್ತು 11ನೇ ತರಗತಿಗೆ ಶಿಕ್ಷಕರನ್ನು ನೇಮಿಸುವಾಗ ಅನುಸರಿಸಲಾಗುವ ಮಾನದಂಡಗಳೇನು; (ವಿವರ ನೀಡುವುದು) | ಪ್ರಸ್ತುತ 9, 10 ನೇ ತರಗತಿಗೆ ಪ್ರೌಢ ಶಾಲಾ ಶಿಕ್ಷಕರಿಗೆ ಇರುವ 2016 ರ ವೃಂದ ಮತ್ತು ನೇಮಕಾತಿಯ ನಿಯಮಗಳನ್ನು ಅನುಸರಿಸಲಾಗುತ್ತಿದೆ. ರಾಷ್ಟ್ರೀಯ ಶಿಕ್ಷಣ ನೀತಿ 2020 ರಲ್ಲಿ ವಿವಿಧ ಹಂತದ ಯಾವುದೇ ಶಿಕ್ಷಕರುಗಳಿಗೆ ನೇಮಕಾತಿಗೆ ಇರಬೇಕಾದ ನಿರ್ದಿಷ್ಟ ಮಾನದಂಡಗಳನ್ನು ನಮೂದಿಸಿಲ್ಲ. |

| | | |
|---|---|---|
| ಇ) | ಸದರಿ ಶಿಕ್ಷಕರಿಗೆ ನಿಗದಿಗೊಳಿಸಲಾದ ವಿದ್ಯಾರ್ಹತೆ, ಮೂಲವೇತನ ಹಾಗೂ ಯಾವ ವೇತನ ಶ್ರೇಣಿಯಲ್ಲಿ ವೇತನವನ್ನು ನೀಡಲಾಗುವುದು; | ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಗಳಂತೆ ವಿದ್ಯಾರ್ಹತೆ ಮತ್ತು ವೇತನ ಶ್ರೇಣಿಯನ್ನು ಮುಂದುವರೆಸಲಾಗುತ್ತಿದ್ದು, ರಾಷ್ಟ್ರೀಯ ಶಿಕ್ಷಣ ನೀತಿಯ ಮಾರ್ಗಸೂಚಿಯಲ್ಲಿ ಯಾವುದೇ ಶಿಕ್ಷಕರಿಗೆ ವಿದ್ಯಾರ್ಹತೆ ಮತ್ತು ವೇತನ ಶ್ರೇಣಿಯನ್ನು ಹಾಗೂ ಬಡ್ತಿಗೆ ಸಂಬಂಧಿಸಿದಂತೆ ಯಾವುದೇ ಮಾನದಂಡಗಳನ್ನು ನಿಗಧಿಪಡಿಸಿರುವುದಿಲ್ಲ. |
| ಈ) | ಅವರ ಮುಂಬಡ್ತಿ ಸಂಬಂಧ ರೂಪಿಸಲಾಗಿರುವ ನಿಯಮಗಳೇನು; | |
| ಉ) | ಸದರಿ ನೀತಿಯ ಅನುಸಾರ ಪ್ರೌಢಶಾಲೆಗಳಿಗೆ ಶಿಕ್ಷಕರ ಕೊರತೆ ನೀಗಿಸಲು ಯಾವ ಕ್ರಮ ವಹಿಸಲಾಗುವುದು? | ಪ್ರಚಲಿತ ನಿಯಮಗಳನುಸಾರ ಮರುಹೊಂದಾಣಿಕೆ ಮಾಡುವ ಮೂಲಕ ಶಿಕ್ಷಕರ ಕೊರತೆಯನ್ನು ನೀಗಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |

ಇಪಿ 367 ಪಿಜಿಸಿ 2022

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು